ರಾಜ್ಯದ ಅನೇಕ ಸರ್ಕಾರಿ ಪ್ರೌಢಶಾಲೆಗಳಲ್ಲಿ ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಕಡೆ ಶಿಕ್ಷಕರ ಮತ್ತು ಉಪನ್ಯಾಸಕರ ಭರ್ತಿ

(2119): ಶ್ರೀ ಸಾದತ್ ಅಲಿಖಾನ್ (ಚನ್ನಪಟ್ಟಣ):–

ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದ ಅನೇಕ ಸರ್ಕಾರಿ ಪ್ರೌಢಶಾಲೆಗಳಲ್ಲಿ ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕನ್ನಡ, ಭೌತಶಾಸ್ತ್ರ, ಜೀವಶಾಸ್ತ್ರ, ಮತ್ತು ಇತರೆ ವಿಷಯಗಳನ್ನು ಬೋಧಿಸಲು ಉಪಾಧ್ಯಾಯರು ಹಾಗೂ ಉಪನ್ಯಾಸಕರುಗಳು ಇಲ್ಲದೇ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ. (ಸರ್ಕಾರಿ ಪದವಿ ಪೂರ್ವ ಕಾಲೇಜು ಬಾಲಕರ: ಬಾಲಕಿಯರ) ಚನ್ನಪಟ್ಟಣ ಈ ಕಾಲೇಜುಗಳಿಗೆ ಸಂಬಂಧಿಸಿದಂತೆ.

ಆ) ಈ ತೊಂದರೆಯಿಂದ ಗ್ರಾಮಾಂತರ ಪ್ರದೇಶದ ವಿದ್ಯಾರ್ಥಿಗಳಿಗೆ ಒಳ್ಳೆಯ ವಿದ್ಯಾಭ್ಯಾಸ ಪಡೆಯಲು ಸಾಧ್ಯವಾಗದೇ ಇರುವುದು ಸಾಧ್ಯವೇ;

ಇ) ಹಾಗಿದ್ದಲ್ಲಿ ಈ ವರ್ಷವಾದರೂ ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಶಿಕ್ಷಕರು ಮತ್ತು ಉಪನ್ಯಾಸಕರನ್ನು ಭರ್ತಿ ಮಾಡುವರೇ ?

ಡಾ।। ಹೆಚ್.ಡಿ. ಲಮಾಣಿ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು)):–

ಅ) ಬಂದಿದೆ.

ಆ) ಹೌದು.

ಇ) ರಾಜ್ಯದಲ್ಲಿನ ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಶೀಘ್ರವೇ ಕ್ರಮ ಕೈಗೊಳ್ಳಲಾಗುವುದು.

ಹಾಗೂ ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ವಿಶೇಷ ನೇರ ನೇಮಕಾತಿ ಸಮಿತಿ ರಚಿಸಿದ್ದು, ಸದರಿ ಸಮಿತಿಯು ದಿನಾಂಕ 13–1–93ರ ಕರ್ನಾಟಕ ವಿಶೇಷ ರಾಜ್ಯಪತ್ರದಲ್ಲಿ ಅರ್ಹ ಅಭ್ಯರ್ಥಿಗಳ ಪಟ್ಟಿ ಪ್ರಕಟಿಸಿದೆ. ಸದರಿ ಅಭ್ಯರ್ಥಿಗಳ ಜಾತಿ, ಆದಾಯ ಹಾಗೂ ಪೋಲೀಸ್ ವರದಿಗಳಿಗಾಗಿ ಸಂಬಂಧಪಟ್ಟ ಅಧಿಕಾರಿಗಳಿಗೆ ಕಳುಹಿಸಲಾಗಿದೆ. ಸದರಿ ವರದಿಗಳು ಬಂದ ಕೂಡಲೇ ಸರ್ಕಾರವು ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವುದು.

ವಕ್ಫ್ ಸಮಿತಿ ಕಛೇರಿಗಳಿಗೆ ಪ್ರತ್ಯೇಕ ಕಟ್ಟಡ

(2121): ಶ್ರೀ ಸಾದತ್ ಅಲಿಖಾನ್ (ಚನ್ನಪಟ್ಟಣ):–

ಮಾನ್ಯ ಉನ್ನತ ಶಿಕ್ಷಣ ಹಾಗೂ ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಜಿಲ್ಲಾ ಕೇಂದ್ರ ಸ್ಥಾನಗಳಲ್ಲಿ ಜಿಲ್ಲಾ ವಕ್ಫ್ ಸಮಿತಿಯ ಕಚೇರಿಗೆ ಪ್ರತ್ಯೇಕ ಕಟ್ಟಡವನ್ನು ಕಟ್ಟಲು ಸರ್ಕಾರವು ತೀರ್ಮಾನ ಕೈಗೊಂಡಿದೆಯೆ;